# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1110 |
| ಉತ್ತರಿಸಬೇಕಾದ ದಿನಾಂಕ | 18.12.2024 |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಸತಿ ಯೋಜನೆಯಡಿ ಕಳೆದ 3 ವರ್ಷಗಳಲ್ಲಿ ಎಷ್ಟು ಮನೆಗಳನ್ನು ಹಂಚಲಾಗಿದೆ; ಹಂಚಬೇಕಾದ ಮನೆಗಳ ಗುರಿಯನ್ನು ಮಾನದಂಡಗಳ ಆಧಾರದಲ್ಲಿ ನಿರ್ಧರಿಸಲಾಗುತ್ತಿದೆ. | ರಾಜ್ಯದಾದ್ಯಂತ 2021-2022, 2022-2023, ಮತ್ತು 2023-2024ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಗಳಡಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಒಟ್ಟು 525512 ಮನೆಗಳನ್ನು ಮಂಜೂರು ಮಾಡಿ ಕಾಮಗಾರಿ ಆದೇಶ ನೀಡಲಾಗಿದೆ.<br><br>2021-22ನೇ ಸಾಲಿಗೆ ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರ ಸಂಖ್ಯೆಗೆ ಅನುಗುಣವಾಗಿ ಎ ಬಿ ಸಿ ಎಂದು ವರ್ಗೀಕರಿಸಿ ಕ್ರಮವಾಗಿ 50, 40 ಹಾಗೂ 30 ರಂತೆ ಮನೆಗಳ ಗುರಿಯನ್ನು ಹಂಚಿಕೆ ಮಾಡಲಾಗಿದೆ. ನಗರ ಪ್ರದೇಶಕ್ಕೆ ಮಹಾನಗರ ಪಾಲಿಕೆ 300, ನಗರಸಭೆ 100 ಪುರಸಭೆ 75 ಹಾಗೂ ಪಟ್ಟಣ ಪಂಚಾಯಿತಿಗೆ 50 ಮನೆಗಳ ಗುರಿಯನ್ನು ಹಂಚಿಕೆ ಮಾಡಲಾಗಿದೆ. ಜನಪ್ರತಿನಿಧಿಗಳ ಬೇಡಿಕೆ ಪ್ರಸ್ತಾವನೆ ಆಧಾರಿಸಿ ಹಾಗೂ ಗುರಿ ಲಭ್ಯತೆಗನುಗಣವಾಗಿ ಹೆಚ್ಚುವರಿ ಮನೆಗಳನ್ನು ಹಂಚಿಕೆ ಮಾಡಲಾಗಿದೆ.<br><br>2022-23 ಹಾಗೂ 2023-24ನೇ ಸಾಲಿಗೆ ಆಯವ್ಯಯದಲ್ಲಿ ಯಾವುದೇ ಹೊಸ ಮನೆಗಳ ಗುರಿಯನ್ನು ನಿಗದಿಪಡಿಸಿರುವುದಿಲ್ಲ. |
| ಆ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಪ್ರಸ್ತುತ ಜಿಪಿಎಸ್ ಮಾಡಿರುವ ನಿಯಮಾನುಸಾರ ಸರಿಯಿರುವ ಎಷ್ಟು ಮನೆಗಳಿಗೆ ಅನುದಾನ ಬಿಡುಗಡೆಯಾಗಿದೆ; ಅನುದಾನ ಬಿಡುಗಡೆಗೆ ಬಾಕಿಯಿರುವ ಮನೆಗಳೆಷ್ಟು ಇದಕ್ಕೆ ಕಾರಣಗಳೇನು ಯಾವಾಗ ಈ ಮನೆಗಳಿಗೆ ಅನುದಾನ ಬಿಡುಗಡೆ ಮಾಡಲಾಗುವುದು; | ಸರ್ಕಾರವು ಪ್ರತಿ ವರ್ಷ ಆಯವ್ಯಯದಲ್ಲಿ ನಿಗಧಿಪಡಿಸಿದ ಅನುದಾನವನ್ನು ತ್ರೈಮಾಸಿಕವಾರು ಬಿಡುಗಡೆ ಮಾಡುವುದರಿಂದ ವಿವಿಧ ವಸತಿ ಯೋಜನೆಗಳಡಿ ಅನುಮೋದನೆಗೊಂಡು ನಿರ್ಮಾಣ ಹಂತದಲ್ಲಿರುವ ಮನೆಗಳ ಜಿಪಿಎಸ್ ಆಧಾರಿತ ಭೌತಿಕ ಪ್ರಗತಿಗುಣವಾಗಿ ಆಡಿಟ್‌ರಲ್ಲಿ ಓಕೆ ಆದ ಅರ್ಹ ಫಲಾನುಭವಿಗಳಿಗೆ ಅನುದಾನದ ಲಭ್ಯತೆಗೆ ಅನುಗುಣವಾಗಿ ನೇರವಾಗಿ ಫಲಾನುಭವಿಗಳ ಆಧಾರ್ ಜೋಡಣೆಗೊಂಡ ಬ್ಯಾಂಕ್ ಖಾತೆಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಅದರಂತೆ ಕಳೆದ 3 ಆರ್ಥಿಕ ವರ್ಷಗಳಲ್ಲಿ ಹಿಂದಿನ ಶ್ರೇಣಿಯ ಮನೆಗಳೂ ಒಳಗೊಂಡಂತೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗೆ ರೂ.265.25 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br><br>ಪ್ರಸ್ತುತ ಬಸವ ವಸತಿ ಯೋಜನೆ ಮತ್ತು ಡಿ. ದೇವರಾಜ ಅರಸು ವಸತಿ ಯೋಜನೆಗಳನ್ನು ಹೊರತುಪಡಿಸಿ ಅರ್ಹ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಮಾಡಲು ಯಾವುದೇ ಬಾಕಿ ಇರುವುದಿಲ್ಲ. ಬಸವ ವಸತಿ ಯೋಜನೆಯಡಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 50 ಮನೆಗಳ ಫಲಾನಭವಿಗಳಿಗೆ ರೂ.13.78 ಲಕ್ಷಗಳು ಮತ್ತು ಉಡುಪಿ ಜಿಲ್ಲೆಯಲ್ಲಿ 136 ಮನೆಗಳ ಫಲಾನುಭವಿಗಳಿಗೆ ರೂ.35.71 ಲಕ್ಷಗಳ ಅನುದಾನ ಬಿಡುಗಡೆಗೆ ಬಾಕಿ ಇರುತ್ತದೆ.<br><br>ಪ್ರಸ್ತುತ ಬಸವ ವಸತಿ ಯೋಜನೆಯಡಿ ಸರ್ಕಾರಕ್ಕೆ ಹೆಚ್ಚುವರಿ ಅನುದಾನವನ್ನು ಒದಗಿಸುವಂತೆ ಕೋರಿ ಕಡತವನ್ನು ಆರ್ಥಿಕ ಇಲಾಖೆಗೆ ಕಳುಹಿಸಲಾಗಿದೆ. ಅನುದಾನ ಬಿಡುಗಡೆಯಾದ ನಂತರ ಫಲಾನುಭವಿಗಳಿಗೆ ಮನೆಗಳ ಪ್ರಗತಿಗೆ ಅನುಗುಣವಾಗಿ ಬಿಡುಗಡೆ ಮಾಡಲಾಗುವುದು |
| ಇ) | ರಾಜ್ಯದಲ್ಲಿ ಮನೆಗಳ ಅನುದಾನ ಬಿಡುಗಡೆಯಾಗುವಲ್ಲಿ ಮತ್ತು ಜಿಪಿಎಸ್ ಮಾಡುವಲ್ಲಿ ಜಿಲ್ಲೆಗಳು ಎದುರಿಸುತ್ತಿರುವ ತಾಂತ್ರಿಕ | ವಿವಿಧ ವಸತಿ ಯೋಜನೆಗಳಡಿ ಫಲಾನುಭವಿಗಳ ಭೌತಿಕ ಪ್ರಗತಿಗನುಗುಣವಾಗಿ ಫಲಾನುಭವಿಗಳ ಖಾತೆಗೆ ಅನುದಾನ ಬಿಡುಗಡೆ ಮತ್ತು ಜಿ.ಪಿ.ಎಸ್.ಗೆ ಭೌತಿಕ ಪ್ರಗತಿಯನ್ನು ಕಾಲಕಾಲಕ್ಕೆ ನಮೂದಿಸುವ ಸಲುವಾಗಿ ಮೊಬೈಲ್ ಆಪ್ ಅಭಿವೃದ್ಧಿ ಪಡಿಸಲಾಗಿದ್ದು, ಸದರಿ **Mobile App Version 1.0** ರಿಂದ ಪ್ರಸ್ತುತ **4.0 Version** ಗೆ ಉನ್ನತೀಕರಿಸಲಾಗಿದೆ ಹಾಗೂ ಹೊಸ ಅಂಶಗಳನ್ನು ಇಂಧಿಕರಿಸುವಂತಹ ಪ್ರಸ್ತಾಪ ಇದ್ದಲ್ಲಿ ಉನ್ನತೀಕರಿಸಲಾಗುವುದು GPS ಮಿತಿಯಲ್ಲಿರುವುದಿಲ್ಲ ಹಾಗೂ ಇನ್ನಿತರೆ ಸಮಸ್ಯೆಗಳು ಕಂಡುಬಂದಲ್ಲಿ ಅಂತಹ ಪ್ರಸ್ತಾವನೆಗಳನ್ನು ಜಿಲ್ಲಾ ಪಂಚಾಯಿತಿ ಮುಖಾಂತರ ಪ್ರಸ್ತಾವನೆಗಳನ್ನು ರಾಜೀವ್ ಗಾಂಧಿ ವಸತಿ |

| | | |
|---|---|---|
| | ಸಮಸ್ಯೆಗಳು ಯಾವುವು: ಜಿಲ್ಲೆಗಳಿಂದ ಸಲ್ಲಿಕೆಯಾದ ಒಟ್ಟು ಪ್ರಕರಣಗಳಲ್ಲಿ ಎಷ್ಟು ಮನೆಗಳ ಸಮಸ್ಯೆಗಳನ್ನು ಪರಿಹರಿಸಲಾಗಿದೆ: ಉಳಿದವುಗಳನ್ನು ಯಾವಾಗ ಪರಿಹರಿಸಲು ಕ್ರಮವಹಿಸಲಾಗುವುದು:. | ನಿಗಮಕ್ಕೆ ಸಲ್ಲಿಸಿದಲ್ಲಿ ಪರಿಶೀಲಿಸಿ ಕ್ರಮವಹಿಸಲಾಗುತ್ತಿದೆ.<br><br>ಮನೆಗಳ GPS ಆಧಾರಿತ ಭೌತಿಕ ಪ್ರಗತಿಗೆ ಅನುಗುಣವಾಗಿ ಆಧಾರ್ ಆಧಾರಿತ ಡಿಬಿಟಿ ಮೂಲಕ ಫಲಾನುಭವಿಗಳ ಖಾತೆಗೆ ನೇರವಾಗಿ ಅನುದಾನವನ್ನು 4 ಸಮಾನ ಕಂತುಗಳಲ್ಲಿ ಬಿಡುಗಡೆ ಮಾಡಲಾಗುತ್ತಿದೆ.<br><br>ಪ್ರಸ್ತುತ ಎಲ್ಲಾ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದ್ದು, ಯಾವುದೇ ತಾಂತ್ರಿಕ ಸಮಸ್ಯೆಗಳು ಕಂಡುಬಂದಿರುವುದಿಲ್ಲ. |
| ಈ) | ಅನುದಾನ ಬಿಡುಗಡೆ ಮತ್ತು ಜಿಪಿಎಸ್ ಮಾಡುವ ಬಗೆಗಿನ ಮೊಬೈಲ್ ಮತ್ತು ಕಂಪ್ಯೂಟ್ಯರ್ ಆಧಾರಿತ ಆಪ್/ ತಂತ್ರಾಂಶಗಳನ್ನು ಎಷ್ಟು ಬಾರಿ ಬದಲಾಯಿಸಿದೆ: ಮತ್ತು ಉನ್ನತೀಕರಿಸಿದೆ: ಈ ಪ್ರಕ್ರಿಯೆಯಲ್ಲಿ ಉದ್ಭವಿಸಿರುವ ಸಮಸ್ಯೆಗಳನ್ನು ಯಾವಾಗ ಬಗೆಹರಿಸಲಾಗುವುದು?. | |

ಸಂಖ್ಯೆ: ವಇ 386 ಹೆಚ್‌ಎಎಂ 2024]

(ಬಿ.ಝಡ್ ಜಮೀರ್ ಅಹಮದ್ ಖಾನ್)
ವಸತಿ, ವಕ್ಫ್, ಮತ್ತು ಅಲ್ಪ ಸಂಖ್ಯಾತರ
ಕಲ್ಯಾಣ ಸಚಿವರು.